Hosa digantha 4/2/14

15 ಐಎಎಸ್ ಅಧಿಕಾರಿಗಳ ವರ್ಗಾವಣೆ | 6 ಮಂದಿಗೆ ಹೆಚ್ಚುವರಿ ಮುಖ್ಯಕಾರ್ಯದರ್ಶಿ ಹುದ್ದೆಗೆ ಬಡ್ತಿ

# ಮದನಗೋಪಾಲ್ ಅರಣ್ಯ ಇಲಾಖೆ ಎಸಿಎಸ್

- ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಕಾರ್ಯದರ್ಶಿಯಾಗಿ ಶಾಲಿನಿ ರಜನೀಶ್
- ಎ.ಕೆ.ಪಟ್ನಾಯಕ್ ಬಿಡಿಎ ಅಧ್ಯಕ್ಷ

**ಬೆಂಗಳೂರು:** ರಾಜ್ಯದಲ್ಲಿ ಸಕಾಲ ಸೇವೆಗೊಂದು ರೂಪ ಕೊಟ್ಟು, ದೇಶಕ್ಕೆ ಮಾದರಿ ಯೋಜನೆಯನ್ನಾಗಿ ಮಾಡುವಲ್ಲಿ ಶ್ರಮವಹಿಸಿದ್ದ ಶಾಲಿನಿ ರಜನೀಶ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಪ್ರಧಾನ ಕಾರ್ಯದರ್ಶಿಯಾಗಿದ್ದ ಮದನ್ ಗೋಪಾಲ್ ಸೇರಿದಂತೆ 15 ಮಂದಿ ಐಎಎಸ್ ಅಧಿಕಾರಿಗಳನ್ನು ವರ್ಗಾವಣೆ ಮಾಡಲಾಗಿದೆ.





ಆರು ಐಎಎಸ್ ಅಧಿಕಾರಿಗಳಿಗೆ ಸರ್ಕಾರದ ಹೆಚ್ಚುವರಿ ಮುಖ್ಯಕಾರ್ಯದರ್ಶಿ ಹುದ್ದೆಗೆ ಬಡ್ತಿ ನೀಡಿ ವಿವಿಧ ಇಲಾಖೆಗಳಿಗೆ ವರ್ಗಾವಣೆ ಮಾಡಲಾಗಿದೆ. ಮದನ್‌ಗೋಪಾಲ್ ಅವರಿಗೆ ಹೆಚ್ಚುವರಿ ಮುಖ್ಯಕಾರ್ಯದರ್ಶಿ ಹುದ್ದೆಗೆ ಬಡ್ತಿ ನೀಡಲಾಗಿದ್ದು, ಅರಣ್ಯ ಇಲಾಖೆಗೆ ವರ್ಗಾವಣೆ ಮಾಡಲಾಗಿದೆ.

ಶಾಲಿನಿ ರಜನೀಶ್ ಅವರನ್ನು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಪ್ರಧಾನ ಕಾರ್ಯದರ್ಶಿ ಹುದ್ದೆಗೆ ವರ್ಗಾವಣೆ ಮಾಡಲಾಗಿದ್ದು, ಇದರ ಜತೆಗೆ ಈಗಿರುವ ಆಡಳಿತ ಸುಧಾರಣೆ ಇಲಾಖೆಯ ಪ್ರಧಾನ ಕಾರ್ಯದರ್ಶಿ ಹುದ್ದೆಯನ್ನು ಹೆಚ್ಚುವರಿಯಾಗಿ ನಿಭಾಯಿಸಲಿದ್ದಾರೆ. ಕರ್ನಾಟಕ ನಗರ ಮೂಲಸೌಲಭ್ಯ ಮತ್ತು ಹಣಕಾಸು ನಿಗಮ (ಕೆಯುಐಡಿಎಫ್‌ಸಿ)ದ ಅಧ್ಯಕ್ಷರಾಗಿದ್ದ ಎಲ್.ವಿ. ನಾಗರಾಜ್ ಅವರನ್ನು ಹಣಕಾಸು ಇಲಾಖೆಯ ಹೆಚ್ಚುವರಿ ಮುಖ್ಯಕಾರ್ಯದರ್ಶಿ ಹುದ್ದೆ ವರ್ಗಾವಣೆ ಮಾಡಲಾಗಿದ್ದರೆ, ಕೆಯುಐಡಿಎಫ್‌ಸಿಯ ಅಧ್ಯಕ್ಷ ಹುದ್ದೆಯ ಹೆಚ್ಚುವರಿ ಹೊಣೆ ಹೊರಲಿದ್ದಾರೆ. ಎಸ್.ಕೆ. ಪಟ್ನಾಯಕ್ ಅವರನ್ನು ಬಿಡಿಎ ಅಧ್ಯಕ್ಷ ಹುದ್ದೆಗೆ, ಟಿ.ಎಂ. ವಿಜಯಭಾಸ್ಕರ್ ಅವರನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಹೆಚ್ಚುವರಿ ಮುಖ್ಯಕಾರ್ಯದರ್ಶಿ ಹುದ್ದೆಗೆ, ಪಿ.ಬಿ. ರಾಮಮೂರ್ತಿ ಅವರಿಗೆ ಬಡ್ತಿ ನೀಡಿ ಕರ್ನಾಟಕ ರಾಜ್ಯ ಕೈಗಾರಿಕೆ ಮತ್ತು ಮೂಲಸೌಲಭ್ಯ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕ ಹುದ್ದೆಯಲ್ಲೇ ಮುಂದುವರೆಸಲಾಗಿದೆ.

ಡಿ. ಸತ್ಯಮೂರ್ತಿ ಅವರಿಗೆ ಬಡ್ತಿ ನೀಡಿ ನಗರಾಭಿವೃದ್ಧಿ ಇಲಾಖೆಯ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಸ್ಥಾನಕ್ಕೆ, ಡಿ.ಎನ್.ನರಸಿಂಹಮೂರ್ತಿ ಅವರಿಗೂ ಬಡ್ತಿ ನೀಡಿ ಮುಖ್ಯಮಂತ್ರಿಗಳ ಹೆಚ್ಚುವರಿ ಮುಖ್ಯಕಾರ್ಯದರ್ಶಿ ಹುದ್ದೆಗೆ ನೇಮಕ ಮಾಡಲಾಗಿದೆ.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಪ್ರಧಾನ ಕಾರ್ಯದರ್ಶಿಯಾಗಿದ್ದ ಎಂ.ಮದನ್ ಗೋಪಾಲ್ ಅವರಿಗೆ ಬಡ್ತಿ ನೀಡಲಾಗಿದ್ದು, ಅವರನ್ನು ಅರಣ್ಯ ಇಲಾಖೆ ಹೆಚ್ಚುವರಿ ಮುಖ್ಯಕಾರ್ಯದರ್ಶಿ ಹುದ್ದೆಗೆ, ಪಿ.ರವಿಕುಮಾರ್ ಅವರಿಗೆ ಬಡ್ತಿ ನೀಡಿ ಇಂಧನ ಇಲಾಖೆ ಹೆಚ್ಚುವರಿ ಮುಖ್ಯಕಾರ್ಯದರ್ಶಿ, ಎನ್.ಶಿವಶೈಲಂ ಅವರನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಪ್ರಧಾನ ಕಾರ್ಯದರ್ಶಿ, ಡಾ.ಅಮಿತಾ ಪ್ರಸಾದ್ ಅವರನ್ನು ಮೈಸೂರಿನಲ್ಲಿರುವ ಆಡಳಿತ ತರಬೇತಿ ಸಂಸ್ಥೆಯ ಪ್ರಧಾನ ನಿರ್ದೇಶಕರನ್ನಾಗಿ, ಐ.ಎಸ್.ಎನ್. ಪ್ರಸಾದ್ ಅವರನ್ನು ಹೊಸದಾಗಿ ಸೃಜಿಸಲಾಗಿರುವ ಹಣಕಾಸು ಇಲಾಖೆಯ ಪ್ರಧಾನ ಕಾರ್ಯದರ್ಶಿ ಹುದ್ದೆಗೆ ವರ್ಗಾವಣೆ ಮಾಡಲಾಗಿದೆ.

ಪಿ.ಎನ್. ಶ್ರೀನಿವಾಸಚಾರಿ ಅವರನ್ನು ಸಾರಿಗೆ ಇಲಾಖೆ ಪ್ರಧಾನ ಕಾರ್ಯದರ್ಶಿ, ಬೆಳಗಾವಿಯ ಪ್ರಾದೇಶಿಕ ಆಯುಕ್ತರಾಗಿದ್ದ ಗಂಗಾರಾಂ ಬಡೇರಿಯಾ ಅವರನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ಇಲಾಖೆಯ ಕಾರ್ಯದರ್ಶಿಯನ್ನಾಗಿ ಮತ್ತು ವಿ.ಬಿ. ಪಾಟೀಲ್ ಅವರನ್ನು ಬೆಳಗಾವಿಯ ಪ್ರಾದೇಶಿಕ ಆಯುಕ್ತರ ಹುದ್ದೆಗೆ ವರ್ಗಾವಣೆ ಮಾಡಲಾಗಿದೆ.

---

PRAJAVANI PAGE-3A

# ಬೆಸ್ಕಾಂ ಎಂಜಿನಿಯರ್ ಲೋಕಾಯುಕ್ತ ಬಲೆಗೆ

**ಹೊಸಕೋಟೆ:** ಕೊಳವೆಬಾವಿ ಮೋಟಾರ್‌ಗೆ ವಿದ್ಯುತ್ ಸಂಪರ್ಕ ಕಲ್ಪಿಸಲು ರೈತರೊಬ್ಬರಿಂದ ₹2 ಸಾವಿರ ಲಂಚ ಸ್ವೀಕರಿಸುತ್ತಿದ್ದ ನಂದಗುಡಿ ಬೆಸ್ಕಾಂ ಕಚೇರಿಯ ಸಹಾಯಕ ಕಾರ್ಯನಿರ್ವಾಹಕ ಎಂಜಿನಿಯರ್ ಮೊಹಮದ್ ಗೌಸ್ ಫೀರ್ ಲೋಕಾಯಕ್ತ ಪೊಲೀಸರಿಗೆ ಸಿಕ್ಕಿಬಿದ್ದ ಘಟನೆ ಸೋಮವಾರ ನಡೆದಿದೆ.

ನೆಲವಾಗಿಲಿನ ರೈತ ನಾರಾಯಣಪ್ಪ ಕೊಟ್ಟ ದೂರಿನ ಮೇರೆಗೆ ಲೋಕಾಯುಕ್ತ ಇನ್‌ಸ್ಪೆಕ್ಟರ್ ಸುಬ್ರಮಣಿ ಅವರ ತಂಡ ಈ ದಾಳಿ ನಡೆಸಿತು. ಪೊಲೀಸರು ಆರೋಪಿಯನ್ನು ಬಂಧಿಸಿದ್ದಾರೆ.

## ವ್ಯಕ್ತಿ ಸಾವು

**ನೆಲಮಂಗಲ:** ವ್ಯಕ್ತಿಯೊಬ್ಬರು ಅನುಮಾನಾಸ್ಪದವಾಗಿ ಸಾವನ್ನಪ್ಪಿರುವ ಘಟನೆ ತಾಲ್ಲೂಕಿನ ಅರಿಶಿನಕುಂಟೆ ಕೆಎಸ್‌ಆರ್‌ಟಿಸಿ ಡಿಪೊ ಹಿಂಭಾಗ ನಡೆದಿದೆ.

ರಾಮಯ್ಯ ಅಲಿಯಾಸ್ ರಾಮ (40) ಮೃತಪಟ್ಟ ವ್ಯಕ್ತಿ. ತುಮಕೂರಿನ ಶಿರಾ ತಾಲ್ಲೂಕಿನ ನಿವಾಸಿಯಾದ ರಾಮ ಅವರು ಅರಿಶಿನಕುಂಟೆಯಲ್ಲಿ ಕೂಲಿ ಕೆಲಸ ಮಾಡುತ್ತಿದ್ದರು. ಇತ್ತೀಚೆಗೆ ನಾಪತ್ತೆಯಾಗಿದ್ದರು. ಸೋಮವಾರ ಅನುಮಾನಾಸ್ಪದ ರೀತಿಯಲ್ಲಿ ಅವರ ಶವ ಪತ್ತೆಯಾಗಿದೆ ಎಂದು ದೂರಿನಲ್ಲಿ ತಿಳಿಸಲಾಗಿದೆ.

---

Vijay Vani 4/2/14

# ಇಂದು, ನಾಳೆ ನೀರು ವ್ಯತ್ಯಯ

**ಬೆಂಗಳೂರು:** ಕರ್ನಾಟಕ ವಿದ್ಯುತ್ ಪ್ರಸರಣ ಸಂಸ್ಥೆ (ಕೆಪಿಟಿಸಿಎಲ್) ತೊರೆಕಾಡನ ಹಳ್ಳಿ ಬಳಿ ಪ್ರಸರಣ ಮಾರ್ಗದ ನಿರ್ವಹಣಾ ಕಾರ್ಯ ಕೈಗೊಳ್ಳುತ್ತಿರುವುದರಿಂಧ ಕಾವೇರಿ 1, 2,3,4ನೇ ಹಂತದ 1 ಮತ್ತು 2ನೇ ಘಟ್ಟದ ಯೋಜನೆಗಳ ಪಂಪಿಂಗ್ ಕಾರ್ಯ ಸ್ಥಗಿತಗೊಳ್ಳಲಿದೆ. ಹಾಗಾಗಿ ಮಂಗಳವಾರ ಹಾಗೂ ಬುಧವಾರ ನಗರಕ್ಕೆ ಕಾವೇರಿ ನೀರು ಪೂರೈಕೆಯಲ್ಲಿ ವ್ಯತ್ಯಯವಾಗಲಿದೆ.

---

Udayavani 04/02/14, page no-3

# ಇಂದು, ನಾಳೆ ನೀರು ಪೂರೈಕೆ ಸಂಪೂರ್ಣ ಸ್ಥಗಿತ

**ಬೆಂಗಳೂರು:** ಕೆಪಿಟಿಸಿಎಲ್ ಸಂಸ್ಥೆಯು ಜಲಮಂಡಳಿಯ ತೊರೆಕಾಡನಹಳ್ಳಿ ಪಂಪಿಂಗ್ ಸ್ಟೇಷನ್ ಬಳಿ ವಿದ್ಯುತ್ ದುರಸ್ತಿ ಕಾಮಗಾರಿ ಕೈಗೊಳ್ಳುತ್ತಿರುವ ಹಿನ್ನೆಲೆಯಲ್ಲಿ ಇಂದು–ನಾಳೆ (ಫೆ. 4,5) ಎರಡು ದಿನಗಳ ಕಾಲ ನಗರಕ್ಕೆ ನೀರು ಪೂರೈಕೆ ಸಂಪೂರ್ಣ ಸ್ಥಗಿತಗೊಳ್ಳಲಿದೆ.



ತೊರೆಕಾಡನಹಳ್ಳಿ ಬಳಿಯ 220 ಕೆ.ವಿ. ಸಾಮರ್ಥ್ಯದ ವಿದ್ಯುತ್ ಸ್ವೀಕೃತಿ ಠಾಣೆಗೆ ವಿದ್ಯುತ್ ಪೂರೈಕೆ ಮಾಡುವ 100 ಎಂವಿಎ ವಿದ್ಯುತ್ ಪ್ರಸರಣ ಮಾರ್ಗದಲ್ಲಿ ದೋಷ ಉಂಟಾಗಿದೆ. ಈ ಹಿನ್ನೆಲೆಯಲ್ಲಿ ಫೆ. 4ರಂದು ಸುಮಾರು ಎಂಟು ಗಂಟೆಗಳ ಕಾಲ ಪ್ರಸರಣ ಮಾರ್ಗದ ನಿರ್ವಹಣಾ ಕಾಮಗಾರಿ ಕೈಗೆತ್ತಿಕೊಳ್ಳಲಾಗುತ್ತಿದೆ. ಈ ಹಿನ್ನೆಲೆಯಲ್ಲಿ ಬೆಳಗ್ಗೆ 9 ರಿಂದ ಸಂಜೆ 5 ಗಂಟೆವರೆಗೆ ನಗರಕ್ಕೆ ನೀರು ಪೂರೈಸುವ ಕಾವೇರಿ 1ನೇ, 2ನೇ, 3ನೇ, ನಾಲ್ಕನೇ ಹಂತದ ಒಂದು ಹಾಗೂ ಎರಡನೇ ಘಟ್ಟಗಳ ಪಂಪಿಂಗ್ ಸ್ಟೇಷನ್‌ಗಳ ಕಾರ್ಯಾಚರಣೆ ಸ್ಥಗಿತಗೊಳ್ಳಲಿದೆ. ಪಂಪಿಂಗ್ ಕಾರ್ಯ ಸುಮಾರು ಎಂಟು ಗಂಟೆಗಳ ಕಾಲ ಸ್ಥಗಿತಗೊಳ್ಳಲಿರುವ ಹಿನ್ನೆಲೆಯಲ್ಲಿ ಇಂದು–ನಾಳೆ ನಗರದ ಯಾವುದೇ ಭಾಗಕ್ಕೂ ಜಲಮಂಡಳಿಯ ಕಾವೇರಿ ನೀರು ಪೂರೈಕೆ ಆಗುವುದಿಲ್ಲ.